# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ


ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 11 :2020–21 ದಿನಾಂಕ: 22.03.2021

## ಬಾಗಲಗುಂಟೆ ವಾರ್ಡ್–14ರ ವಾರ್ಡ್ ಸಭೆಯ ನಡವಳಿ

ದಿ.22.03.2021 ರಂದು ಬೆಳಗ್ಗೆ 11.30 ಗಂಟೆಗೆ ಶ್ರೀ.ಕೆ.ಮರುಳಸಿದ್ದಪ್ಪ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀ.ವೆಂಕಟೇಶಪ್ಪ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ಬಾಗಲಗುಂಟೆ ವಾರ್ಡ್ ನಂ.14
2. ಶ್ರೀ.ಬಿ.ಆರ್.ರಂಗನಾಥ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಟಿ.ದಾಸರಹಳ್ಳಿ ಉಪ–ವಿಭಾಗ
3. ಶ್ರೀ.ಮೋಹನ್, ಹಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
4. ಶ್ರೀ.ಕಮಲ್ ಗದ್ದಿಮನಿ, ಕಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
5. ಶ್ರೀಮತಿ.ಚೇತನ ಕುಮಾರಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬಾಗಲಗುಂಟೆ
6. ಶ್ರೀ.ವಿಜಯಕುಮಾರ್ ಜೆ, ಮಾರ್ಷಲ್, ಬಿಬಿಎಂಪಿ, ಬೆಂಗಳೂರು
7. ಶ್ರೀ.ಶಶಿಕಿರಣ್ ಎಸ್, ಸಹಾಯಕ ಅಭಿಯಂತರರು, ಬೆಸ್ಕಾಂ, ಬೆಂಗಳೂರು
8. ಶ್ರೀ.ಶಿವಲಿಂಗೇಗೌಡ, ತೋಟಗಾರಿಕೆ ಇಲಾಖೆ, ಬಿಬಿಎಂಪಿ, ಬಾಗಲಗುಟೆ
9. ಶ್ರೀ.ಮೂಡಲಗಿರಿಯಪ್ಪ, ಅಧ್ಯಕ್ಷರು, ಸೌಂದರ್ಯ ನಗರ ಕ್ಷೇಮಾಭಿವೃದ್ದಿ ಸಂಘ
10. ಶ್ರೀ. ಗುರುಪ್ರಸಾದ್, ವಲಯಾಧ್ಯಕ್ಷರು, ಲಯನ್ ಸಂಸ್ಥೆ
11. ಶ್ರೀ.ಮುದ್ದ ಹನುಮೇಗೌಡರು ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ
12. ಶ್ರೀ.ಲಕ್ಷ್ಮಿ ವೆಂಕಟೇಶ್, ನಾಗರೀಕ ಹಿತ ರಕ್ಷಣಾ ಸಮಿತಿ, ಮುನಿಕೊಂಡಪ್ಪ ಬಡಾವಣೆ
13. ಶ್ರೀ.ಸದಾಶಿವಯ್ಯ, ಎಂ.ಇ.ಐ ಬಡಾವಣೆ ನಾಗರೀಕ ಹಿತರಕ್ಷಣಾ ಸಮಿತಿ

ಶ್ರೀ.ಕೆ.ಮರುಳಸಿದ್ದಪ್ಪ, ನೋಡೆಲ್ ಅಧಿಕಾರಿ, ವಾರ್ಡ್ ನಂ.14, ಬಾಗಲಗುಂಟೆ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ದಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

2021–22ನೇ ಸಾಲಿನ ಆಯವ್ಯಯಕ್ಕೆ ಸಂಬಂಧಪಟ್ಟಂತೆ ವಾರ್ಡ್ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ವಾರ್ಡ್ ಸಭೆಯ ಸದಸ್ಯರುಗಳು ನೀಡಿದ ಸಲಹೆ/ಸೂಚನೆಗಳನ್ನು ಆಯವ್ಯಯಪಟ್ಟಿಯಲ್ಲಿ ಅಳವಡಿಸಿಕೊಳ್ಳಲು ನೋಡೆಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ಸೂಚಿಸಿದರು. ಹಾಗೂ ಎಂ.ಇ.ಐ ಬಡಾವಣೆ 18ನೇ ಮುಖ್ಯರಸ್ತೆ, ಬಾಗಲಗುಂಟೆ 22ನೇ ಅಡ್ಡರಸ್ತೆ & ಭುವನೇಶ್ವರಿನಗರದ 9ನೇ ಮತ್ತು 10ನೇ ಮುಖ್ಯರಸ್ತೆಗಳಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.



Scanned with CamScanner

2. ಕೋವಿಡ್-19 ರೋಗವು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ ಒಟ್ಟು ಪಾಸಿಟಿವ್ ಕೇಸ್ 2630, ಬಿಡುಗಡೆ 2551 ಹಾಗೂ ಒಟ್ಟು Active case ಪ್ರಕರಣಗಳು 33 ಮರಣ-46 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಹಾಗೂ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ರೂ.250.00 ಗಳನ್ನು ದಂಡ ವಿಧಿಸಿ ಕ್ರಮ ಜರುಗಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ವಿವರಿಸಿದರು.

3. ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಹಾಗೂ ರಸ್ತೆಗುಂಡಿ ಮುಚ್ಚುವ ಬಗ್ಗೆ.

ಬಾಗಲಗುಂಟೆ ವಾರ್ಡ್ ನಂ.14ರಲ್ಲಿ ಈಗಾಗಲೇ ಸಿಡೇದಹಳ್ಳಿ ಮುಖ್ಯರಸ್ತೆ, ಡಿಫೆನ್ಸ್ ಕಾಲೋನಿ, ಮುನೇಶ್ವರನಗರ ರಸ್ತೆಗಳಲ್ಲಿ ಡಾಂಬರೀಕರಣ ಕಾಮಗಾರಿ ಕೈಗೊಂಡು ಹಾಗೂ ಬಾಕಿ ಉಳಿದಿರುವ ಬಡಾವಣೆಗಳಲ್ಲಿ ರಸ್ತೆಗುಂಡಿ ಮುಚ್ಚುವ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳುವುದಾಗಿ ವಾರ್ಡ್ ಅಭಿಯಂತರರರು ಸಭೆಯಲ್ಲಿ ತಿಳಿಸಿದರು.

4. ಇತರೆ ವಿಷಯಗಳ ಬಗ್ಗೆ.

1. ಶ್ರೀ.ಗುರು ಪ್ರಸಾದ್, ವಾರ್ಡ್ ಸಮಿತಿ ಸದಸ್ಯರು ರವರು ಹೆಸರಘಟ್ಟ ಮುಖ್ಯರಸ್ತೆಯಲ್ಲಿ ಹಸಿ ಕಸವನ್ನು ಶೇಖರಿಸಿ, ಲಾರಿಗೆ ತುಂಬಿಸುತ್ತಿರುವುದರಿಂದ ಕೆಟ್ಟ ವಾಸನೆ ಹೆಚ್ಚಾಗಿ ಇಲ್ಲಿನ ಅಕ್ಕಪಕ್ಕದ ನಿವಾಸಿಗಳಿಗೆ ವಾಸಿಸಲು ಹಾಗೂ ಸಾರ್ವಜನಿಕರಿಗೆ ಓಡಾಡಲು ಕಷ್ಟಕರವಾಗಿರುತ್ತದೆ ಆದುದರಿಂದ ಸದರಿ ಸ್ಥಳದಲ್ಲಿ ಹಸಿಕಸವನ್ನು ಶೇಖರಿಸದೇ ಬೇರೆಡೆ ಸೂಕ್ತ ಜಾಗಕ್ಕೆ ಸ್ಥಳಾಂತರಿಸಲು ಕ್ರಮವಹಿಸುವಂತೆ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

2. ಮುದ್ದ ಹನುಮೇಗೌಡರು ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ ರವರು ಬೆಳಗ್ಗೆ 5.00 ಗಂಟೆಯ ಸಮಯದಲ್ಲಿ ಕಸಕ್ಕೆ ಬೆಂಕಿ ಹಾಕುತ್ತಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ಕಷ್ಟಕರವಾಗುತ್ತಿರುತ್ತದೆ ಹಾಗೂ ಸಿಡೇದಹಳ್ಳಿ ಮುಖ್ಯರಸ್ತೆಯಲ್ಲಿರುವ ಬ್ಲಾಕ್‌ಸ್ಪಾಟ್‌ನ ಕಸವನ್ನು ಸರಿಯಾಗಿ ತೆಗೆಯುತ್ತಿರುವುದಿಲ್ಲ ಹಾಗೂ ಮನೆಮನೆಗಳಿಂದ ಕಸ ಸಂಗ್ರಹಣೆ ಮಾಡುವ ಆಟೋಗಳು ಸಹ ಒಂದು ವಾರವಾದರೂ ಕಸ ಸಂಗ್ರಹಣೆಗಾಗಿ ಬರುತ್ತಿರುವುದಿಲ್ಲ, ಸಿಡೇದಹಳ್ಳಿ ಗ್ರಾಮ ವ್ಯಾಪ್ತಿಗೆ ಹೆಚ್ಚುವರಿಯಾಗಿ 02 ಆಟೋಗಳನ್ನು ಕಸ ಸಂಗ್ರಹಣೆಗಾಗಿ ನಿಯೋಜಿಸಲು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯಗಳ ಬಗ್ಗೆ ತುರ್ತು ಕ್ರಮವಹಿಸುವಂತೆ ವಾರ್ಡ್‌ನ ಆರೋಗ್ಯ ಪರಿವೀಕ್ಷಕರಿಗೆ ನೋಡೆಲ್ ಅಧಿಕಾರಿ ರವರು ತಿಳಿಸಿದರು. ಮತ್ತು ರೂ.15.00 ಕೋಟಿಗಳ ಕಾಮಗಾರಿಯನ್ನು ತುರ್ತಾಗಿ ಪ್ರಾರಂಬಿಸಲು ಕೋರಿದರು.

3. ಮೂಡಲಗಿರಿಯಪ್ಪ, ಸೌಂದರ್ಯ ನಗರ ಕ್ಷೇಮಾಭಿವೃದ್ಧಿ ಸಂಘ ರವರು ಸೌಂದರ್ಯ ಬಡಾವಣೆಯಲ್ಲಿ ಕಸ ಸಂಗ್ರಹಣೆ ವಾಹನ ಸರಿಯಾಗಿ ಕಾರ್ಯನಿರ್ವಹಿಸದಿರುವ ಬಗ್ಗೆ ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ನೀರಿನ ಹಾಗೂ ಒಳಚರಂಡಿ ಸಂಪರ್ಕಕ್ಕಾಗಿ ನಿಗಧಿಪಡಿಸಿರುವ ಮೊತ್ತವನ್ನು ಪಾವತಿಸಿದ್ದರೂ ಸಹ, ಮೀಟರ್ ಅಳವಡಿಸದೇ, ಯಾವುದೇ ಸಂಪರ್ಕವನ್ನು ನೀಡುತ್ತಿಲ್ಲ ಎಂದು ತಿಳಿಸಿದರು. ಈ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿ ರವರಿಗೆ ನೋಡೆಲ್ ಅಧಿಕಾರಿಗಳು ತಿಳಿಸಿದರು ಮತ್ತು ಸೌಂದರ್ಯ ನಗರದ 2ನೇ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ರಸ್ತೆಗೆ ಡಾಂಬರೀಕರಣ ಮಾಡಲು ತಿಳಿಸಿದರು.

4. ಲಕ್ಷ್ಮಿ ವೆಂಕಟೇಶ್, ನಾಗರೀಕ ಹಿತ ರಕ್ಷಣಾ ಸಮಿತಿ, ಮುನಿಕೊಂಡಪ್ಪ ಬಡಾವಣೆ ರವರು ಮುನಿಕೊಂಡಪ್ಪ ಬಡಾವಣೆ ಡಿಫೆನ್ಸ್ ಕಾಲೋನಿ, ಮುನಿಕೊಂಡಪ್ಪ ಬಡಾವಣೆ, ಅಶೋಕನಗರದಲ್ಲಿ ರಸ್ತೆಗೆ ಡಾಂಬರೀಕರಣ ಮಾಡುವುದು ಬಾಕಿ ಇರುತ್ತದೆ ಎಂದು ತಿಳಿಸಿದರು. ಸದರಿ ವಿಷಯಕ್ಕೆ ರಂಗನಾಥ್, ಸಹಾಯಕ ಕಾರ್ಯಪಾಲಕ ಅಭಿಯಂತರರು ರವರು ಪ್ರತಿಕ್ರಿಯಿಸಿ ಈ ವಾರದಲ್ಲಿ ಡಾಂಬರೀಕರಣ ಮಾಡುವುದಾಗಿ ತಿಳಿಸಿದರು.

Scanned with CamScanner

5. ಬಾಗಲಗುಂಟೆ ವಾರ್ಡ್ ನಂ.14ರಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಒಳಚರಂಡಿ ಸಂಪರ್ಕಕ್ಕಾಗಿ ಪೈಪ್‌ಲೈನ್ ಅಳವಡಿಸುತ್ತಿದ್ದು, ಸದರಿ ಕಾಮಗಾರಿಯನ್ನು ನಿರ್ವಹಿಸಿದ ನಂತರ Restore ಮಾಡಲೇಬೇಕೆಂದು ಸಭೆಯಲ್ಲಿ ಎಲ್ಲಾ ವಾರ್ಡ್ ಸದಸ್ಯರುಗಳು ಒಮ್ಮತದಿಂದ ಕೋರಿದರು. ಸದರಿ ವಿಷಯಕ್ಕೆ ಶ್ರೀಮತಿ.ಚೇತನ ಕುಮಾರಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ರವರು ಪ್ರತಿಕ್ರಿಯಿಸಿ ತುರ್ತಾಗಿ ಕಾಮಗಾರಿಯನ್ನು ನಿರ್ವಹಿಸುವುದಾಗಿ ತಿಳಿಸಿದರು.

ಅಂತಿಮವಾಗಿ ನೋಡೆಲ್ ಅಧಿಕಾರಿ ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

22/03/2024

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 14, ಬಾಗಲಗುಂಟೆ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

22/03/2024

**ನೋಡೆಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ**

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.

Scanned with CamScanner